**All India Radio: Bangalore**
**Regional Bulletin In Kannada**
**16.09.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**16.09.2025 / 6.40 p.m.**
**<><><><>**

ಮುಖ್ಯಾಂಶಗಳು :

- ಕೃಷ್ಣಾ ಮೇಲ್ದಂಡೆ ಯೋಜನೆ ಭೂಸ್ವಾಧೀನಕ್ಕೆ ಪರಿಹಾರ ನಿಗದಿ - ನೀರಾವರಿ ಭೂಮಿ ಎಕರೆಗೆ ೪೦ ಲಕ್ಷ, ಒಣ ಭೂಮಿಗೆ ೩೦ ಲಕ್ಷ
- ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಪ್ರತ್ಯೇಕ ಸಚಿವಾಲಯ - ಸಂಪುಟ ಸಭೆಯಲ್ಲಿ ನಿರ್ಧಾರ
- ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ಪಾರುಪತ್ಯ ಮೆರೆಯಲು ಸನ್ನದ್ಧ- ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
- ಮಾಲೂರು ಶಾಸಕ ಕೆ.ವೈ.ನಂಜೇಗೌಡ ಶಾಸಕ ಸ್ಥಾನ ಅಸಿಂಧು- ಮರು ಮತ ಎಣಿಕೆಗೆ ಆದೇಶ
- ಕೆ.ಆರ್.ಎಸ್. ಹಿನ್ನೀರಿನ ಅಭಿವೃದ್ಧಿ ಕುರಿತಂತೆ ಕೇಂದ್ರ ಸಚಿವರಾದ ರಾಮ್ ಮೋಹನ್ ನಾಯ್ಡು ಹೆಚ್.ಡಿ.ಕುಮಾರಸ್ವಾಮಿ ಚರ್ಚೆ

<><><><>

ಕೃಷ್ಣಾ ಮೇಲ್ದಂಡೆ ಯೋಜನೆಗೆ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಂಪುಟ ಸಭೆ ಮಹತ್ವದ ತೀರ್ಮಾನ ತೆಗೆದುಕೊಂಡಿದೆ. ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ೩ನೇ ಹಂತದ ಭೂಸ್ವಾಧೀನದ ಪರಿಹಾರ ನಿಗಧಿ ಮಾಡಿದ್ದು, ನೀರಾವರಿ ಭೂಮಿಗೆ ಎಕರೆಗೆ ೪೦ ಲಕ್ಷ ಹಾಗೂ ಒಣ ಭೂಮಿಗೆ ಎಕರೆಗೆ ೩೦ ಲಕ್ಷ ರೂಪಾಯಿ ಪರಿಹಾರ ನಿಗದಿ ಮಾಡಲಾಗಿದೆ ಎಂದು ಹೇಳಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ,**

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-೩ ಮತ್ತು ನ್ಯಾಯಾಧೀಕರಣದ ತೀರ್ಪಿನಂತೆ ಆಲಮಟ್ಟಿ ಜಲಾಶಯದ ಎತ್ತರವನ್ನು ೫೧೯.೬ ಮೀಟರ್ ನಿಂದ ೫೨೪.೨೫೬ ಮೀಟರ್‌ಗೆ ಏರಿಸಲು ಅನುಮತಿ ನೀಡಲಾಗಿದೆ. ಜಲಾಶಯದ ಎತ್ತರವನ್ನು ಹೆಚ್ಚಿಸುವುದರಿಂದ ಆಲಮಟ್ಟಿಯ ಹಿನ್ನೀರಿನಿಂದ ಸುಮಾರು ೭೫ಸಾವಿರ ಎಕರೆಗೂ ಹೆಚ್ಚು ಜಮೀನು ಮುಳುಗಡೆಯಾಗುವ ಸಂಭವವಿದೆ.  ಈ ಜಮೀನಿಗೆ ೫ ಕೋಟಿ ೯೪ ಲಕ್ಷ ಹೆಕ್ಟೇರ್ ಭೂಮಿಗೂ ನೀರಾವರಿ ಕಲ್ಪಿಸಬಹುದಾಗಿದೆ. ಯುಕೆಪಿ ಹಂತ ೩ ಬೃಹತ್ ನೀರಾವರಿ ಯೋಜನೆಯಾಗಿದ್ದು, ಈ ಭಾಗದ ರೈತರ ಜಮೀನಿಗೆ ನೀರೊದಗಿಸಿ, ಅವರ ಜೀವನ ಮಟ್ಟದ ಸುಧಾರಣೆಯಾಗಲಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ಒಟ್ಟಾರೆ ಈ ಯೋಜನೆಗೆ ಸುಮಾರು ೭೦ ಸಾವಿರ ಕೋಟಿ ರೂಪಾಯಿ ವೆಚ್ಚವಾಗುವ ಅಂದಾಜು ಇದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಹಿತಿ ನೀಡಿದ್ದಾರೆ.

<><><>

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಗಾಗಿ ಇನ್ನೂ ಹೆಚ್ಚು ಕೆಲಸಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮತ್ತು ಅಭಿವೃದ್ಧಿ ಕಾಮಗಾರಿಗಳ ಮೇಲುಸ್ತುವಾರಿ ಮಾಡಲು ಕಲ್ಯಾಣ ಕರ್ನಾಟಕ ಪ್ರದೇಶ ಸಚಿವಾಲಯ ಸ್ಥಾಪನೆಗೆ ಸಚಿವ ಸಂಪುಟ ಸಭೆಯು ಅನುಮೋದನೆ ನೀಡಿದೆ. ಮಾಹಿತಿ ತಂತ್ರಜ್ಞಾನ ಹಾಗೂ ಗ್ರಾಮೀಣ ಅಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಈ ವಿಷಯವನ್ನು ಹಂಚಿಕೊಂಡಿದ್ದಾರೆ. ಸಚಿವಾಲಯ ಸ್ಥಾಪನೆಯಾಗಿರುವುದರಿಂದ ಕಲ್ಯಾಣ ಕರ್ನಾಟಕ ಪ್ರದೇಶದ ಮತ್ತಷ್ಟು ಅಭಿವೃದ್ಧಿ ಸಾಧ್ಯವಾಗಲಿದೆ. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಕಾಮಗಾರಿಗಳನ್ನು ಸಕಾಲದಲ್ಲಿ ಪೂರೈಸುವ ಸಲುವಾಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯ ೭ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಚೇರಿಗೆ ಹೆಚ್ಚುವರಿ ಹುದ್ದೆಗಳನ್ನು ಸೃಷ್ಟಿಸುವ ಮೂಲಕ ಈ ಕಚೇರಿಗಳನ್ನು ಮತ್ತಷ್ಟು ಬಲಪಡಿಸಲು ಸಚಿವ ಸಂಪುಟ ನಿರ್ಧಾರ ತೆಗೆದುಕೊಂಡಿದೆ.

<><><>

ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ಈಗಾಗಲೇ ಆರಂಭಿಕ ಸಿದ್ಧತೆಗಳನ್ನು ಪೂರೈಸಿದ್ದು, ಸೆಮಿಕಂಡಕ್ಟರ್ ಮತ್ತು ಚಿಪ್ ಉತ್ಪಾದನಾ ಕೇಂದ್ರವಾಗಿ ತನ್ನನ್ನು ತಾನು ಸ್ಥಾಪಿಸಿಕೊಳ್ಳಲು ಸನ್ನದ್ಧವಾಗಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್

ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಬ್ರಿಟಿಷ್ ಮೂದ ಸೆಮಿಕಂಡಕ್ಟರ್ ತಯಾರಿಕಾ ಮತ್ತು ತರಬೇತಿ ಕೇಂದ್ರ ಉದ್ಘಾಟಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಈಗಾಗಲೇ ೧೦ ಕಂಪನಿಗಳು ಚಿಪ್ ತಯಾರಿಕಾ ಘಟಕಗಳನ್ನು ಆರಂಭಿಸಿವೆ ಎಂದು ಹೇಳಿದ್ದಾರೆ.

<><><><>

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮಾಲೂರು ಕ್ಷೇತ್ರದ ಕಾಂಗ್ರೆಸ್ ಶಾಸಕ ಕೆ ವೈ ನಂಜೇಗೌಡ ಆಯ್ಕೆಯನ್ನು ಹೈಕೋರ್ಟ್ ಅಸಿಂಧುಗೊಳಿಸಿದೆ. ಮತಗಳ ಮರು ಎಣಿಕೆ ಮಾಡುವಂತೆ ಸೂಚನೆ ನೀಡಿದೆ. ಜಿಲ್ಲಾ ಚುನಾವಣಾ ಅಧಿಕಾರಿ ಮತ ಎಣಿಕೆಯ ವಿಡಿಯೋ ಸಲ್ಲಿಸದ ಹಿನ್ನೆಲೆಯಲ್ಲಿ ಜಿಲ್ಲಾ ಚುನಾವಣಾಧಿಕಾರಿ ವಿರುದ್ಧ ಕ್ರಮಕ್ಕೆ ಸೂಚಿಸಿ ನಾಲ್ಕು ವಾರದಲ್ಲಿ ಮರು ಮತ ಎಣಿಕೆ ನಡೆಸಲು ಆದೇಶಿಸಿದೆ. ಆಯ್ಕೆ ಅಸಿಂಧುಗೊಳಿಸಿ ಆದೇಶ ನೀಡುತ್ತಿದ್ದಂತೆಯೇ ಇದಕ್ಕೆ ತಡೆ ನೀಡುವಂತೆ ನಂಜೇಗೌಡರ ಪರ ವಕೀಲೆ ನಳಿನಾ ಮಾಯಗೌಡ ಮನವಿ ಮಾಡಿದ್ದಾರೆ. ಇದನ್ನು ಪುರಸ್ಕರಿಸಿದ ನ್ಯಾಯಮೂರ್ತಿ ಆರ್.ದೇವದಾಸ್ ಅವರಿದ್ದ ಹೈಕೋರ್ಟ್ ಪೀಠ, ೩೦ ದಿನಗಳವರೆಗೆ ತನ್ನದೇ ತೀರ್ಪಿಗೆ ಹೈಕೋರ್ಟ್ ತಡೆ ನೀಡಿದ್ದು, ಸುಪ್ರೀಂಕೋರ್ಟ್ ಗೆ ಮೇಲ್ಮನವಿ ಸಲ್ಲಿಸಲು ಅವಕಾಶ ನೀಡಿದೆ. ನಂಜೇಗೌಡ ಅವರು ಒಂದು ತಿಂಗಳೊಳಗೆ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿ ಹೈಕೋರ್ಟ್ ಆದೇಶಕ್ಕೆ ತಡೆ ಬರಬೇಕು. ಇಲ್ಲವಾದಲ್ಲಿ ಅವರು ಶಾಸಕ ಸ್ಥಾನ ಕಳೆದುಕೊಳ್ಳಲಿದ್ದಾರೆ. ೨೦೨೩ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ನಂಜೇಗೌಡ ಬಿಜೆಪಿ ಅಭ್ಯರ್ಥಿ ಮಂಜುನಾಥಗೌಡ ವಿರುದ್ಧ ಕೇವಲ ೨೪೮ ಮತಗಳ ಅಂತರದಿಂದ ಗೆದ್ದಿದ್ದರು. ಹೀಗಾಗಿ ಮತ ಎಣಿಕೆ ವೇಳೆ ಲೋಪವಾಗಿದೆ ಎಂದು ಬಿಜೆಪಿ ಅಭ್ಯರ್ಥಿ ಮಂಜುನಾಥಗೌಡ ಆರೋಪಿಸಿದ್ದಾರೆ.

<><><><>

ಕೆ.ಆರ್.ಎಸ್. ಹಿನ್ನೀರಿನಲ್ಲಿ ಜಲಕ್ರೀಡೆ, ಜಲವಿಮಾನಯಾನ ಕ್ರೀಡೆ ಆಯೋಜಿಸಲು ಅನುಮೋದನೆ ನೀಡುವಂತೆ ಕೋರಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ನಾಗರಿಕ ವಿಮಾನ ಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರೊಂದಿಗೆ ಚರ್ಚೆ ನಡೆಸಿದ್ದಾರೆ. ಈ ಕುರಿತಂತೆ ಕುಮಾರಸ್ವಾಮಿ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ಜಲಕ್ರೀಡೆ ಜಲವಿಮಾನಯಾನ ಕ್ರೀಡೆಗಳು ಪ್ರವಾಸಿಗರನ್ನು ಆಕರ್ಷಿಸುವ ನಿಟ್ಟಿನಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಅವರು ತಿಳಿಸಿದ್ದಾರೆ. ಪ್ರಾದೇಶಿಕ ಸಂಪರ್ಕವನ್ನು ಹೆಚ್ಚಿಸಲು ಹಾಸನ ವಿಮಾನ ನಿಲ್ದಾಣದ

ಕಾಮಗಾರಿಗಳನ್ನು ತ್ವರಿತ ಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಗಿದೆ. ಬೆಂಗಳೂರಿನ ಎರಡನೇ ವಿಮಾನ ನಿಲ್ದಾಣ ಯೋಜನೆಯ ಪ್ರಗತಿಯ ಬಗ್ಗೆಯೂ ಚರ್ಚಿಸಲಾಗಿದೆ ಎಂದು ಕುಮಾರಸ್ವಾಮಿ ಮಾಹಿತಿ ಹಂಚಿಕೊಂಡಿದ್ದಾರೆ.

<><><><>

ಸಂವಿಧಾನದಲ್ಲಿ ಹಾಗೂ ಕಾನೂನಿನಲ್ಲಿ ಅವಕಾಶ ಇಲ್ಲದೇ ಇದ್ದರೂ ರಾಜ್ಯ ಸರಕಾರ ಜಾತಿ ಜನಗಣತಿ ನಡೆಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಣತಿಯಲ್ಲಿನ ಕಾಲಂಗಳನ್ನು ಗಮನಿಸಿದರೆ ಹಿಂದೂ, ಇಸ್ಲಾಂ, ಕ್ರಿಶ್ಚಿಯನ್, ಜೈನ, ಸಿಕ್, ಬೌದ್ಧ, ಪಾರ್ಸಿ, ನಾಸ್ತಿಕರು, ಇತರೇ ಎಂಬ ವರ್ಗಗಳನ್ನು ಮಾಡಿದ್ದಾರೆ. ಇತರೇ ಎಂಬುದು ಕಾನೂನುಬಾಹಿರ ಎಂದು ಆಕ್ಷೇಪಿಸಿದ್ದಾರೆ. ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸರ್ವೇ ಮಾಡುವುದಾಗಿ ಹೇಳಿ, ಮತ್ತೊಮ್ಮೆ ವೀರಶೈವ ಲಿಂಗಾಯತ ಸಮಾಜವನ್ನು ಒಡೆಯುವ ಮತ್ತೊಂದು ದುಸ್ಸಾಹಸಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಾಗಿದ್ದಾರೆ ಎಂದು ದೂರಿದ್ದಾರೆ.

<><><><>

ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಜನರಲ್ಲಿ ನೈರ್ಮಲ್ಯ ಶುಚಿತ್ವ ಕುರಿತು ಅರಿವು ಮೂಡಿಸುವ ಉದ್ದೇಶದೊಂದಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ನಾಳೆಯಿಂದ ಅಕ್ಟೋಬರ್ ೦೨ ರ ವರೆಗೆ ಸ್ವಚ್ಛತಾ ಹೀ ಸೇವಾ ಪಾಕ್ಷಿಕ-೨೦೨೫ ಆಂದೋಲನ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಎಲ್ಲಾ ಸಾರ್ವಜನಿಕರು ಆಂದೋಲನದಲ್ಲಿ ಪಾಲ್ಗೊಗೊಳ್ಳಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ಎನ್ ಅನುರಾಧ ತಿಳಿಸಿದ್ದಾರೆ. ಸೇವಾ ಪಾಕ್ಷಿಕದ ಹಿನ್ನೆಲೆಯಲ್ಲಿ ವಿಜಯನಗರ ಜಿಲ್ಲಾ ಬಿಜೆಪಿ ಘಟಕ ಜಿಲ್ಲಾ ಮತ್ತು ಮಂಡಲ ಗಳಲ್ಲಿ ವಿವಿಧ ಸೇವಾ ಚಟುವಟಿಕೆಗಳನ್ನು ಕೈಗೊಂಡಿದೆ. ಬಳ್ಳಾರಿ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ನಾಳೆಯಿಂದ ಅಕ್ಟೋಬರ್ ೨ ರವರೆಗೆ ' ಸ್ವಚ್ಛತೆಯೇ ಸೇವೆ ಪಾಕ್ಷಿಕ-೨೦೨೫' ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ತಿಳಿಸಿದ್ದಾರೆ. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಸ್ವಚ್ಛತೆ ಮತ್ತು ಶುಚಿತ್ವ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ವಿವಿಧ ಕಾರ್ಯಕ್ರಮ ಮತ್ತು ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

<><><>

ಹಾವೇರಿ ಜಿಲ್ಲೆಯಲ್ಲಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಜಿಲ್ಲಾ ಆಸ್ಪತ್ರೆ ಸಹಯೋಗದಲ್ಲಿ ಜಿಲ್ಲೆಯಲ್ಲಿ ನಾಳೆಯಿಂದ ಸ್ವಸ್ತ ನಾರಿ ಶಕ್ತಿ ಪರಿವಾರ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ನಿರ್ದೇಶಕ ಪ್ರದೀಪಕುಮಾರ್ ತಿಳಿಸಿದ್ದಾರೆ. ಈ ಅಭಿಯಾನದಲ್ಲಿ ಮಹಿಳೆಯರು, ಹದಿಹರೆಯದವರು ಮತ್ತು ಮಕ್ಕಳ ಹಲವು ಆರೋಗ್ಯ ಚಟುವಟಿಕೆಗಳನ್ನು ಆಯ್ಕೆ ಮಾಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳ ಮಾರ್ಗದರ್ಶನದೊಂದಿಗೆ ಆಯುಷ್ ಮಾನ್ ಆರೋಗ್ಯ ಕೇಂದ್ರದ ಸಿಬ್ಬಂದಿ ಆರೋಗ್ಯ ತಪಾಸಣೆ ನಡೆಸಲಿದ್ದಾರೆ. ಜಿಲ್ಲೆಯ ಐದು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಶಿಬಿರಗಳನ್ನು ಏರ್ಪಡಿಸಲಾಗಿದೆ. ಮುಖ್ಯವಾಗಿ ರಕ್ತ, ಕ್ಯಾನ್ಸರ್, ಮಾನಸಿಕ ಆರೋಗ್ಯದ ತಪಾಸಣೆ, ರಕ್ತದಾನ, ಟಿಬಿ ತಪಾಸಣೆಗೆ ವಿಶೇಷ ಒತ್ತು ನೀಡಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

<><><>

ಪ್ರಧಾನ ಮಂತ್ರಿ ನರೇಂದ್ರ ಮೋದಿ ಸರ್ಕಾರದಲ್ಲಿ ಸರಕು ಮತ್ತು ಸೇವಾ ತೆರಿಗೆಯನ್ನು ಇಳಿಕೆ ಮಾಡಿ ನಾಲ್ಕು ಹಂತದಲ್ಲಿದ್ದುದನ್ನು ಎರಡೇ ಹಂತದಲ್ಲಿ ಕಾರ್ಯಗತಗೊಳಿಸಲಾಗಿದೆ. ಸರ್ಕಾರದ ಈ ಕ್ರಮವನ್ನು ಬಳ್ಳಾರಿ ಜಿಲ್ಲಾ ವಾಣಿಜ್ಯೋದ್ಯಮ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತಾರಾಜ್ ನಾಗಿರೆಡ್ಡಿ ಸ್ವಾಗತಿಸಿದ್ದಾರೆ.

**ಧ್ವನಿ : ಯಶವಂತಾರಾಜ್ ನಾಗಿರೆಡ್ಡಿ, ಜಿಲ್ಲಾ ವಾಣಿಜ್ಯೋದ್ಯಮ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ**

<><><>

ಯಾದಗಿರಿ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದಾದ ಬೆಳೆ ಹಾನಿಗೆ ಸಂಬಂಧಿಸಿದಂತೆ ಯಾವೊಬ್ಬ ಅರ್ಹರೈತರ ಜಮೀನು ಬಿಟ್ಟು ಹೋಗದಂತೆ, ಸಮಗ್ರವಾಗಿ ವರದಿ ಸಲ್ಲಿಸಲು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅತಿವೃಷ್ಟಿಯಿಂದ ನಷ್ಟಕ್ಕೆ ಒಳಗಾದ ರೈತರಿಗೆ ನ್ಯಾಯಯುತವಾಗಿ ಪರಿಹಾರ ದೊರೆಯಲು ಮಾನವೀಯ ನೆಲೆಯ ಮೇಲೆ, ಸಮಗ್ರವಾಗಿ ಜಂಟಿ ಸಮೀಕ್ಷೆ ನಡೆಸಬೇಕು. ಈ ವರದಿ ಸಲ್ಲಿಸಿದ ನಂತರ ಪುನರ್ ಪರಿಶೀಲಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ರೈತರಿಗೆ ಬೀಜ, ರಸಗೊಬ್ಬರದ ಕೊರತೆಯಾಗದಂತೆ ನಿಗಾವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>